ಇ) ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯಗಳನ್ನು ತೆರೆಯಲು ಅಗತ್ಯ ಅನುದಾನವನ್ನು ಯಾವಾಗ ಬಿಡುಗಡೆ ಮಾಡಲಾಗುವುದು?

ಶ್ರೀ ಹೆಚ್. ಆಂಜನೇಯ (ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)

ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಶ್ರವಣಬೆಳಗೊಳ ಕ್ಷೇತ್ರದ ವ್ಯಾಪ್ತಿಯ ಅಣತಿ ಗ್ರಾಮದಲ್ಲಿ ಒಂದು ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯವು ಕಾರ್ಯನಿರ್ವಹಿಸುತ್ತಿದೆ;

ಆ) ಈಗಾಗಲೇ ಒಂದು ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯವು ಕಾರ್ಯನಿರ್ವಹಿಸುತ್ತಿರುವುದರಿಂದ ಈ ಗ್ರಾಮದಲ್ಲಿ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯವನ್ನು ಪ್ರಾರಂಭಿಸಲು ಜಿಲ್ಲೆಯ ಬೇಡಿಕೆಯನುಸಾರ ಪರಿಶೀಲಿಸಲಾಗುವುದು.

ಇ) ಹೊಸ ವಿದ್ಯಾರ್ಥಿನಿಲಯಗಳ ಮಂಜೂರಾತಿಯು ಜಿಲ್ಲೆಯ ಒಟ್ಟಾರೆ ಬೇಡಿಕೆ ಹಾಗೂ ಆಯವ್ಯಯವನ್ನು ಅವಲಂಬಿಸಿರುತ್ತದೆ.

ಅಂತ್ಯೋದಯ ಯೋಜನೆ

504(1100); ಶ್ರೀ ಬಾಲಕೃಷ್ಣ ಹೆಚ್.ಸಿ. (ಮಾಗಡಿ)

ಅ) ರಾಜ್ಯದಲ್ಲಿ **"ಅಂತ್ಯೋದಯ"** ಯೋಜನೆಯ ಪಡಿತರವನ್ನು ಸ್ಥಗಿತಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಯೋಜನೆಯನ್ನು ಸ್ಥಗಿತಗೊಳಿಸಲು ಕಾರಣಗಳೇನು;

ಇ) ಈ ಯೋಜನೆಯನ್ನು ಸ್ಥಗಿತಗೊಳಿಸಿರುವುದರಿಂದ ಫಲಾನುಭವಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಈ ಯೋಜನೆಯನ್ನು ಪುನಃ ಪ್ರಾರಂಭಿಸಲು ಸರ್ಕಾರಕ್ಕೆ ತೊಂದರೆಗಳೇನು?

ಶ್ರೀ ದಿನೇಶ್ ಗುಂಡೂರಾವ್ (ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು)

ಅ) ರಾಜ್ಯದಲ್ಲಿ ಅಂತ್ಯೋದಯ ಅನ್ನ ಯೋಜನೆಯಡಿಯ ಫಲಾನುಭವಿಗಳಿಗೆ ಪಡಿತರವನ್ನು ಸ್ಥಗಿತಗೊಳಿಸಿರುವುದಿಲ್ಲ.

ಆ) ಅನ್ವಯಿಸುವುದಿಲ್ಲ.

ಇ) ಅನ್ವಯಿಸುವುದಿಲ್ಲ.

ಈ) ಅನ್ವಯಿಸುವುದಿಲ್ಲ.

ಶುಶ್ರೂಷಕಿಯರ ನೇಮಕ

505(806); ಶ್ರೀ ಯು.ಬಿ. ಬಣಕಾರ (ಹಿರೇಕೆರೂರು)

ಅ) National Rural Health Mission (NRHM) ನಲ್ಲಿ ನೇಮಕಗೊಂಡ ಶುಶ್ರೂಷಕಿಯರನ್ನು ಖಾಯಂಗೊಳಿಸುವ ವಿಚಾರ ಸರಕಾರದ ಮುಂದಿದೆಯೇ;

ಆ) ಹಾಲಿ ಖಾಲಿ ಇರುವ ಶುಶ್ರೂಷಕಿಯರ ಹುದ್ದೆಗಳೆಷ್ಟು;

ಇ) ಇವುಗಳ ಬಗ್ಗೆ ಸರ್ಕಾರ ಕೈಗೊಳ್ಳಲಿರುವ ಕ್ರಮವೇನು?

ಶ್ರೀ ಯು.ಟಿ. ಖಾದರ್ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಇಲ್ಲ.

ಆ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ 1435 ಶುಶ್ರೂಷಕರ ಹುದ್ದೆಗಳು ಖಾಲಿ ಇವೆ.

ಇ) 593 ಶುಶ್ರೂಷಕರನ್ನು ವಿಶೇಷ ನೇಮಕಾತಿ ಸಮಿತಿ ಮುಖಾಂತರ ನೇಮಕಾತಿ ಮಾಡಲು ವಿಶೇಷ ನಿಯಮಗಳನ್ನು ರಚಿಸುವ ಪ್ರಸ್ತಾವನೆ ಸರ್ಕಾರದ ತೀವ್ರ ಪರಿಶೀಲನೆಯಲ್ಲಿದೆ. ಅಲ್ಲದೆ, 842 ಶುಶ್ರೂಷಕರ